# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 277 |
| ಸದಸ್ಯರ ಹೆಸರು | : | ಶ್ರೀ. ಪ್ರಕಾಶ್ ಕೆ. ರಾಥೋಡ್<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 15-02-2023 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಅ.ನಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಹುಬ್ಬಳ್ಳಿ ಹಾಗೂ ಧಾರವಾಡ ಬೈಪಾಸ್ ದ್ವಿಮುಖ ರಸ್ತೆಯಲ್ಲಿ ಪದೇ ಪದೇ ಅಪಘಾತಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ. |
| (ಆ) | ರಸ್ತೆ ಅಗಲೀಕರಣಕ್ಕೆ ಇರುವ ಅಡೆತಡೆಗಳೇನು; | ಈ ರಸ್ತೆಯಲ್ಲಿ ಅಪಘಾತಗಳನ್ನು ತಡೆಗಟ್ಟಲು ರಸ್ತೆ ಸುರಕ್ಷಾ ಕ್ರಮಗಳನ್ನು ಅಳವಡಿಸಲಾಗಿದೆ. ಆದಾಗ್ಯೂ ಈ ರಸ್ತೆಯಲ್ಲಿ ಅಪಘಾತಗಳಾಗುತ್ತಿರುವುದರಿಂದ ಮಾನ್ಯ ಸಚಿವರು, ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ, ನವದೆಹಲಿರವರು ದಿನಾಂಕ:11.02.2021 ರಂದು ತುರ್ತು ಸಭೆ ಕರೆದು ಈ ಭಾಗದ ರಸ್ತೆಯನ್ನು 6 ಪಥದ ರಸ್ತೆಯನ್ನಾಗಿ ಅಗಲೀಕರಣಗೊಳಿಸಲು ಶೀಘ್ರ ಕ್ರಮವಹಿಸಿ ಕಾಮಗಾರಿಯನ್ನು ತುರ್ತಾಗಿ ಕೈಗೆತ್ತಿಕೊಳ್ಳಲು ಸೂಚಿಸಿದ್ದರು. ಅದರಂತೆ ರಾಷ್ಟ್ರೀಯ ಹೆದ್ದಾರಿ-48 (ಹಳೇ NH ಸಂಖ್ಯೆ:4) ರ ಕಿ.ಮೀ.403.00 ರಿಂದ 433.00 ರ ಹುಬ್ಬಳ್ಳಿ-ಧಾರವಾಡ ಬೈಪಾಸ್ 6 ಪಥದ ರಸ್ತೆ ಅಗಲೀಕರಣ ಕಾಮಗಾರಿಗೆ ಕೇಂದ್ರ ಸರ್ಕಾರದ ಅನುಮೋದನೆ ದೊರೆತ್ತಿದ್ದು, ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI), ಬೆಂಗಳೂರು ರವರ ವತಿಯಿಂದ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. ಸದರಿ ರಸ್ತೆಯನ್ನು ದ್ವಿಪಥ ರಸ್ತೆಯಿಂದ ಷಟ್ಪಥ ರಸ್ತೆಯನ್ನು ನಿರ್ಮಾಣ ಮಾಡಲು ಈಗಾಗಲೇ ಟೆಂಡರ್ ಕರೆದು ಮೆ॥ APS Hydro Pvt. Ltd; ಮತ್ತು ಮೆ॥ R&C Infra Engineering Pvt. Ltd; (JV) ಗುತ್ತಿಗೆದಾರರನ್ನು ದಿನಾಂಕ:**06-12-2022** ರಂದು ನೇಮಿಸಲಾಗಿದೆ. ಪ್ರಸ್ತುತ ಕಾಮಗಾರಿ ಪ್ರಾರಂಭದ ಪೂರ್ವ ಸಿದ್ಧತೆಗಳು ಪ್ರಗತಿಯಲ್ಲಿವೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿದ್ದಾರೆ.<br>ಕಾಮಗಾರಿಯ ಪೂರ್ವ ಸಿದ್ಧತೆಗಳು ಮುಗಿಯುತ್ತಿದ್ದಂತೆ, ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದೆಂದು ಹಾಗೂ ಈ ರಸ್ತೆ ಅಗಲೀಕರಣಕ್ಕೆ ಪ್ರಸ್ತುತ ಯಾವುದೇ ಅಡಚಣೆಗಳಿರುವುದಿಲ್ಲವೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| (ಇ) | ಈ ಮಾರ್ಗವನ್ನು ಎಷ್ಟು ಪಥಗಳಾಗಿ ಮಾಡಲು ಯೋಜಿಸಲಾಗಿದೆ? (ಸಂಪೂರ್ಣ ವಿವರ ಒದಗಿಸುವುದು) | ರಾಷ್ಟ್ರೀಯ ಹೆದ್ದಾರಿ-4 ಬೆಂಗಳೂರು-ಪೂನ ಭಾಗದ ಹುಬ್ಬಳ್ಳಿ-ಧಾರವಾಡ ಬೈಪಾಸ್ ರಸ್ತೆ ಕಿ.ಮೀ.403.800 ರಿಂದ 433.280 ರವರೆಗಿನ ಸುಮಾರು ಕಿ.ಮೀ.30.300 ಉದ್ದದ ಈಗಿನ ದ್ವಿಪಥ ರಸ್ತೆಯನ್ನು ಷಟ್ಪಥ ರಸ್ತೆಯನ್ನಾಗಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವತಿಯಿಂದ ಅಗಲೀಕರಣ ಮಾಡಲಾಗುತ್ತಿದೆ. |

ಕಡತ ಸಂಖ್ಯೆ: ಲೋಇ 33 ಸಿಎನ್‌ಹೆಚ್ 2023 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು